## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋಲಾರ ಜಿಲ್ಲೆ ಮುಳಬಾಗಿಲು ವಿಧಾನಸಭಾ ಕ್ಷೇತ್ರದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಕಳಪೆಯಾಗಿರುವ ಬಗ್ಗೆ ತನಿಖೆ ನಡೆಸಿ ವರದಿ ನೀಡುವ ಕುರಿತು.

ಉಲ್ಲೇಖ: ಶ್ರೀ ಅಮರೇಶ್, ಮಾಜಿ ಶಾಸಕರು, ಮುಳಬಾಗಿಲು ವಿಧಾನ ಸಭಾ ಕ್ಷೇತ್ರ, ಕೋಲಾರ ಜಿಲ್ಲೆ ಇವರು ದೂರು ಮನವಿ ಪತ್ರ ದಿನಾಂಕ 07.02.2017.

ಪ್ರಸ್ತಾವನೆ:

2008 ರಿಂದ 2013 ರವರೆಗಿನ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ ಕೋಲಾರ ಜಿಲ್ಲೆ ಮುಳಬಾಗಿಲು ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ಕಾಮಗಾರಿಗಳು ಕಳಪೆಯಾಗಿರುವ ಬಗ್ಗೆ ಶ್ರೀ ಅಮರೇಶ್, ಮಾಜಿ ಶಾಸಕರು, ಮುಳಬಾಗಿಲು ವಿಧಾನ ಸಭಾ ಕ್ಷೇತ್ರ, ಕೋಲಾರ ಜಿಲ್ಲೆ ಇವರು ದೂರು ಮನವಿ ಸಲ್ಲಿಸಿದ್ದು, ಈ ಪ್ರಕರಣ ಕುರಿತು ವಾಸ್ತವಾಂಶದ ಬಗ್ಗೆ ತನಿಖೆ ನಡೆಸಿ ಪೂರ್ಣ ವಿವರಗಳೊಂದಿಗೆ ವರದಿ ಪಡೆಯಲು ಅಧೀಕ್ಷಕ ಅಭಿಯಂತರರು, ಪಂಚಾಯತ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ವೃತ್ತ, ಬೆಂಗಳೂರು ಹಾಗೂ ಮುಖ್ಯ ಕಾರ್ಯಚರಣೆ ಅಧಿಕಾರಿಗಳು(ಪ್ರಭಾರ) ಇವರನ್ನು ನಿಯೋಜಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:16:ಆರ್‌ಆರ್‌ಸಿ:2016, ದಿನಾಂಕ 27.02.2017**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2008 ರಿಂದ 2013 ರವರೆಗಿನ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿಯಲ್ಲಿ ಕೋಲಾರ ಜಿಲ್ಲೆ ಮುಳಬಾಗಿಲು ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ಕಾಮಗಾರಿಗಳು ಕಳಪೆಯಾಗಿರುವ ಬಗ್ಗೆ ಸಮಗ್ರವಾಗಿ ಪರಿಶೀಲಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ತನಿಖೆ ನಡೆಸಿ ಇದಕ್ಕೆ ಜವಾಬ್ದಾರರಾದ ಅಧಿಕಾರಿ/ನೌಕರರ ವಿವರಗಳ ಕುರಿತು ವಿವರವಾದ ವರದಿಯನ್ನು ತುರ್ತಾಗಿ ನೀಡಲು ಅಧೀಕ್ಷಕ ಅಭಿಯಂತರರು, ಪಂಚಾಯತ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ವೃತ್ತ, ಬೆಂಗಳೂರು ಹಾಗೂ ಮುಖ್ಯ ಕಾರ್ಯಚರಣೆ ಅಧಿಕಾರಿಗಳು(ಪ್ರಭಾರ) ಇವರನ್ನು ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆ.ಆರ್.ಆರ್.ಡಿ.ಎ., ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೋಲಾರ

4. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಬೆಂಗಳೂರು ವೃತ್ತ, ಬೆಂಗಳೂರು.
5. ಕಾರ್ಯಪಾಲಕ ಅಭಿಯಂತರರು, ಯೋಜನಾ ವಿಭಾಗ, ಕೋಲಾರ
6. ಶ್ರೀ ಅಮರೇಶ್, ಮಾಜಿ ಶಾಸಕರು, ಮುಳಬಾಗಿಲು ವಿಧಾನ ಸಭಾ ಕ್ಷೇತ್ರ, ಕೋಲಾರ ಜಿಲ್ಲೆ.